ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:20-10-2023

## ಸುತ್ತೋಲೆ

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ಆಯ್ಕೆಗೆ 2ನೇ ಸುತ್ತಿನ ಕೌನ್ಸಿಲಿಂಗ್ ಅನ್ನು ಆಯೋಜಿಸುವ ಕುರಿತು.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿ:06.10.2023 & ದಿ:10.10.2023.

*******

2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಾಲೇಜುಗಳಲ್ಲಿನ ಹೆಚ್ಚುವರಿ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:22.09.2023 ರಿಂದ ದಿನಾಂಕ:05.10.2023 ರವರೆಗೆ ನಡೆದ ಮೊದಲ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳಿಗೆ ಸಂಬಂಧಿಸಿದಂತೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಬೇಕಿರುತ್ತದೆ.

ಕರ್ತವ್ಯಕ್ಕೆ ವರದಿ ಮಾಡಿಕೊಂಡ ನಂತರ, ಉಳಿಕೆಯಾಗಿರುವ ಕಾರ್ಯಭಾರಕ್ಕೆ ಅನುಗುಣವಾಗಿ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ 2ನೇ ಹಂತದ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು, ಅದರಂತೆ, **ದಿನಾಂಕ:26.10.2023 ರಿಂದ 2ನೇ ಹಂತದ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಅನ್ನು ಆಯೋಜಿಸಲಾಗಿದೆ.**

2ನೇ ಹಂತದ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಆದ್ಯತೆಯನುಸಾರ ಕೆಳಕಂಡ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿದೆ.

1. ದಿನಾಂಕ:22.09.2023 ರಿಂದ ದಿನಾಂಕ:05.10.2023 ರವರೆಗೆ ನಡೆದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿ, ಕಾಲೇಜು ಆಯ್ಕೆ ಮಾಡಿಕೊಂಡು, ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವಾಗ ಕಾರ್ಯಭಾರ ಇಲ್ಲವೆಂದು ತಿರಸ್ಕೃತಗೊಂಡ ಅಭ್ಯರ್ಥಿಗಳು.

2. ದಿನಾಂಕ:22.09.2023 ರಿಂದ ದಿನಾಂಕ:05.10.2023 ರವರೆಗೆ ನಡೆದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿ, ಕಾಲೇಜುಗಳನ್ನು ಆಯ್ಕೆ ಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಕಾಲೇಜು ಬದಲಾವಣೆ ಬಯಸಿ ಪ್ರಾಂಶುಪಾಲರ ಮೂಲಕ ಅರ್ಜಿ ಸಲ್ಲಿಸಿರುವ ಅತಿಥಿ ಉಪನ್ಯಾಸಕರು.

    - ಕಾಲೇಜು ಬದಲಾವಣೆ ಬಯಸಿರುವ ಅತಿಥಿ ಉಪನ್ಯಾಸಕರು ತಮಗೆ ಅವಶ್ಯವಿದ್ದ ಕಾಲೇಜುಗಳು ಆಯ್ಕೆಯಾಗದೇ ಇದ್ದಲ್ಲಿ ಸದರಿ ಅತಿಥಿ ಉಪನ್ಯಾಸಕರು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾಲೇಜಿನಲ್ಲಿಯೇ ಮುಂದುವರೆಯಬಹುದಾಗಿದೆ. ಕಾಲೇಜು ಬದಲಾವಣೆ ಮಾಡಿಕೊಂಡ ನಂತರದಲ್ಲಿ ಅತಿಥಿ ಉಪನ್ಯಾಸಕರ ಕಾರ್ಯಭಾರ/ ಕಾಲೇಜನ್ನು ಕೂಡಲೇ dynamic ಆಗಿ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಇತರೆ ಅಭ್ಯರ್ಥಿಗಳಿಗೆ ಲಭ್ಯಗೊಳಿಸಿ ಪ್ರದರ್ಶಿಸಲಾಗುವುದು.
    - ಕಾಲೇಜು ಬದಲಾವಣೆ ಬಯಸಿ, ಬೇರೆ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರು, ಸದರಿ ಕಾಲೇಜಿನಲ್ಲಿ ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗಿಂತ ಕೊನೆಯವರಾಗಿರುತ್ತಾರೆ.

......2

3. ಮೊದಲನೆ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡ ಕೆಲವು ಅತಿಥಿ ಉಪನ್ಯಾಸಕರು ಆನ್‌ಲೈನ್ ಅರ್ಜಿಯಲ್ಲಿ ತಪ್ಪಾಗಿ ನಮೂದಿಸಿದ್ದ ವಿವರಗಳನ್ನು edit ಮಾಡಲು ಅವಕಾಶ ನೀಡಲಾಗಿದ್ದು, ಅಂತಹ ಅತಿಥಿ ಉಪನ್ಯಾಸಕರು edit ಮಾಡಿದ ನಂತರದಲ್ಲಿನ ಮೆರಿಟ್ ಅನ್ವಯ 2ನೇ ಹಂತದ ಕೌನ್ಸಿಲಿಂಗ್‌ಗೆ ಅರ್ಹರಿರುತ್ತಾರೆ.

4. ಈಗಾಗಲೇ ನಡೆದ ಮೊದಲನೇ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ವಿಷಯವಾರು ಮೆರಿಟ್ ಪಟ್ಟಿಯಲ್ಲಿ ಕೊನೆಯದಾಗಿ ಆಯ್ಕೆ ಹೊಂದಿದ ಅಭ್ಯರ್ಥಿಯ ನಂತರದ ಮೆರಿಟ್ ಕ್ರಮ ಸಂಖ್ಯೆಯಿಂದ ಪ್ರಾರಂಭವಾಗುವ ಅಭ್ಯರ್ಥಿಗಳು.

5. ಮೊದಲನೆ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಗಣಿತಶಾಸ್ತ್ರ ಮತ್ತು ಮೈಕ್ರೋ-ಬಯಾಲಜಿ ವಿಷಯಗಳಿಗೆ ಸಂಬಂಧಿಸಿದಂತೆ ಕ್ರಮವಾಗಿ ಮೆರಿಟ್ ಕ್ರಮ ಸಂಖ್ಯೆ 601 ಮತ್ತು 84 ಗಳಿಂದಾಚೆಗೆ ತಂತ್ರಾಂಶದಲ್ಲಿ ಕಲ್ಯಾಣ-ಕರ್ನಾಟಕ ಅಭ್ಯರ್ಥಿಗಳ ಮೀಸಲಾತಿ ಶೇಕಡವಾರು ಸಂಖ್ಯೆಗಳಲ್ಲಿ ವ್ಯತ್ಯಯವಾಗಿದ್ದರಿಂದ ಸದರಿ ಕ್ರಮ ಸಂಖ್ಯೆಯಾಚೆಗಿನ ಅಭ್ಯರ್ಥಿಗಳು 2ನೇ ಸುತ್ತಿನ ಕೌನ್ಸಿಲಿಂಗ್‌ಗೆ ಅರ್ಹರಿರುತ್ತಾರೆ.

6. ಮೇಲೆ ತಿಳಿಸಿರುವಂತೆ ಕ್ರಮ ಸಂಖ್ಯೆ 1 ರಿಂದ 5 ರವರೆಗಿನ ಎಲ್ಲಾ ಅರ್ಹ ಅತಿಥಿ ಉಪನ್ಯಾಸಕರಿಗೆ/ಅಭ್ಯರ್ಥಿಗಳಿಗೆ Common Merit ಅನ್ವಯಿಸಿ, ಕೌನ್ಸಿಲಿಂಗ್ ನಡೆಸಲಾಗುವುದು.

7. ಮುಂದುವರೆದು, **ಸರ್ಕಾರಿ ಸಂಸ್ಕೃತ ಕಾಲೇಜುಗಳು ಮತ್ತು ಚಿತ್ರಕಲಾ ಕಾಲೇಜುಗಳಿಗೆ** ಸಂಬಂಧಿಸಿದಂತೆ ಅತಿಥಿ ಉಪನ್ಯಾಸಕರ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಸಹ **ದಿನಾಂಕ:26.10.2023 ರಿಂದ ನಡೆಸಲಾಗುವುದು.**

**2ನೇ ಸುತ್ತಿನ ಕೌನ್ಸಿಲಿಂಗ್‌ನ ತಾತ್ಕಾಲಿಕ ವೇಳಾಪಟ್ಟಿ**

| ಕ್ರ.ಸಂ. | ವಿವರ | ದಿನಾಂಕ |
|---|---|---|
| 1. | ರಾಜ್ಯವ್ಯಾಪಿ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ | 21.10.2023 |
| 2. | ತಾತ್ಕಾಲಿಕ ಕಾರ್ಯಭಾರ ಪ್ರಕಟಿಸುವ ದಿನಾಂಕ | 21.10.2023 |
| 3. | ತಾತ್ಕಾಲಿಕ ಕಾರ್ಯಭಾರ ಹಾಗೂ ಕೌನ್ಸಲಿಂಗ್‌ಗಾಗಿ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ | 25.10.2023 |
| 4. | ಮೆರಿಟ್ ಪಟ್ಟಿಯನ್ವಯ ಕಾಲೇಜು ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕಗಳು | 26.10.2023 ರಿಂದ |
| 5. | ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ | 31.10.2023 |
| **ಆನ್‌ಲೈನ್ ಅರ್ಜಿ ಸಲ್ಲಿಸಲು ಇಲಾಖೆಯ ಅಂತರ್ಜಾಲ ತಾಣ dce.karnataka.gov.in ಅನ್ನು ಸಂಪರ್ಕಿಸುವುದು.** | | |

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ